# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 08.08.2023ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2023-24ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು:**

**ಅನುಪಸ್ಥಿತರು:**

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು, ಎಲ್ಲಾ ಸದಸ್ಯರುಗಳು, ವಿಶೇಷ ಆಹ್ವಾನಿತರು ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿದರು.

- **ಸಂತಾಪ ಸೂಚಕ ನಿರ್ಣಯ:**

  ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾಗಿ ಅಧಿಕಾರ ನಿರ್ವಹಿಸಿದ್ದ ಪ್ರೊ.ಕೆ.ಭೈರಪ್ಪ ಇವರು ದಿನಾಂಕ 31.07.2023ರಂದು ದೈವಾಧೀನರಾಗಿರುತ್ತಾರೆ. ಸದರಿಯವರು ದಿನಾಂಕ 05.06.2014ರಿಂದ 04.06.2018ರವರೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾಗಿದ್ದ ಅವಧಿಯಲ್ಲಿ ಸಿಂಡಿಕೇಟು, ಶೈಕ್ಷಣಿಕ ಮಂಡಳಿ ಹಾಗೂ ಇತರೆ ಪ್ರಾಧಿಕಾರಗಳ ಅಧ್ಯಕ್ಷರಾಗಿದ್ದು, ವಿಶ್ವವಿದ್ಯಾನಿಲಯದ ಆಡಳಿತ ಮತ್ತು ಶೈಕ್ಷಣಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿರುತ್ತಾರೆ. ಇವರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಯು ಅತೀವ ಸಂತಾಪವನ್ನು ವ್ಯಕ್ತಪಡಿಸಿ, ಎರಡು ನಿಮಿಷಗಳ ಮೌನ ಪ್ರಾರ್ಥನೆಯನ್ನು ಸಲ್ಲಿಸಿ ಸಂತಾಪ ಸೂಚಕ ನಿರ್ಣಯವನ್ನು ಅಂಗೀಕರಿಸಿತು.

- **ಸ್ವಾಗತ**

I. ಸರಕಾರದ ಆದೇಶ ಸಂಖ್ಯೆ: ಸಿಆಸುಇ 257 ಆಸೇವ 2023 ದಿನಾಂಕ 01.08.2023ರಂತೆ ಡಾ.ರಾಜು ಕೃಷ್ಣ ಚಲಣ್ಣವರ್, ಕುಲಸಚಿವರು (ಪರೀಕ್ಷಾಂಗ) ಇವರು ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು

(ಆಡಳಿತ) ಹುದ್ದೆಯ ಪ್ರಭಾರವನ್ನು ವಹಿಸಿಕೊಂಡಿರುವ ವಿಚಾರವನ್ನು ಮಾನ್ಯ ಕುಲಪತಿಯವರು ಸಭೆಯಲ್ಲಿ ತಿಳಿಸುತ್ತಾ, ಸಭೆಗೆ ಸ್ವಾಗತಿಸಿದರು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(ii) ರ ಪ್ರಕಾರ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಹಾಜರಾಗಲು ಆಗಮಿಸಿರುವ ಡಾ.ರಾಮೇಗೌಡ ಎಂ., ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಚೇರಿ, ಮಂಗಳೂರು ಇವರನ್ನು ಮಾನ್ಯ ಕುಲಪತಿಯವರು ಸಭೆಗೆ ಸ್ವಾಗತಿಸಿದರು.

III. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಾನ್ಯ ಕುಲಪತಿಯವರಿಂದ ನಾಮನಿರ್ದೇಶನಗೊಂಡಿರುವ ಶ್ರೀಮತಿ ಸಮೀರ ಕೆ.ಎ., ಪ್ರಾಂಶುಪಾಲರು, ಏಮ್ಸ್ ಪ್ರಥಮ ದರ್ಜೆ ಕಾಲೇಜು, ಕಡಬ-574221 ಇವರನ್ನು ಮಾನ್ಯ ಕುಲಪತಿಯವರು ಸಭೆಗೆ ಸ್ವಾಗತಿಸಿದರು.

➢ **ಕೃತಜ್ಞತೆ**

I. ದಿನಾಂಕ 21.04.2021 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ಕಾರ್ಯನಿರ್ವಹಿಸುತ್ತಿದ್ದ ಪ್ರೊ.ಕಿಶೋರ್ ಕುಮಾರ್ ಸಿ.ಕೆ.ಇವರನ್ನು ಸರಕಾರದ ಪತ್ರ ಸಂಖ್ಯೆ ಸಿಆಸುಇ 237 ಆಸೇವ 2023 ದಿನಾಂಕ 17.07.2023ರಂತೆ ಕುಲಸಚಿವರ ಹುದ್ದೆಯ ಕರ್ತವ್ಯದಿಂದ ಬಿಡುಗಡೆಗೊಳಿಸಿರುವ ವಿಚಾರವನ್ನು ಕುಲಸಚಿವರು ಸಭೆಯ ಗಮನಕ್ಕೆ ತಂದರು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 30(1)(ii)ರ ಪ್ರಕಾರ ಆಯುಕ್ತರು, ಕಾಲೇಜು ಶಿಕ್ಷಣ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಹಾಜರಾಗುತ್ತಿದ್ದ ಡಾ.ವಿಷ್ಣುಮೂರ್ತಿ.ಕೆ.ಎ., ಇವರನ್ನು ಆಯುಕ್ತರ ಪತ್ರದನ್ವಯ ಜಂಟಿ ನಿರ್ದೇಶಕರ ಕರ್ತವ್ಯದಿಂದ ಬಿಡುಗಡೆಗೊಳಿಸಿರುತ್ತಾರೆ.

III. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಾನ್ಯ ಕುಲಪತಿಯವರಿಂದ ನಾಮನಿರ್ದೇಶನಗೊಂಡಿರುವ ಡಾ.ಮಂಜುನಾಥ ಎ ಕೋಟ್ಯಾನ್, ಪ್ರಾಂಶುಪಾಲರು, ಶ್ರೀ ಭುವನೇಂದ್ರ ಕಾಲೇಜು, ಕಾರ್ಕಳ ಇವರ ಸದಸ್ಯತ್ವದ ಅವಧಿಯು

ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಿರುವ ವಿಷಯವನ್ನು ಮಾನ್ಯ ಕುಲಪತಿಯವರು ಸಭೆಯ ಗಮನಕ್ಕೆ ತಂದರು.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕೆ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಸರ್ವರಿಗೂ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

**I. ನಡವಳಿಗಳ ದೃಢೀಕರಣ**

ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿಯ 2023-24ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಡವಳಿಯ ದೃಢೀಕರಣ.

**-ದೃಢೀಕರಿಸಲಾಯಿತು. –**

**II. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ಪರಿನಿಯಮ / ವಿನಿಯಮಗಳು**

**-ಯಾವುದೂ ಇರುವುದಿಲ್ಲ.-**

III. **ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು**

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಶೈ.ಮ..ಸಾ.ಸ.1:1(2023-24)

**ವಿಷಯ:** ಸ್ನಾತಕೋತ್ತರ ಕಾರ್ಯಕ್ರಮಗಳನ್ನು ನಿಯಂತ್ರಿಸುವ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ತಿದ್ದುಪಡಿ ವಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಗಿ, ತಿದ್ದುಪಡಿ ವಿನಿಯಮವನ್ನು ಸರಕಾರಕ್ಕೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಶೈ.ಮ.ಸಾ.ಸ.1:2(2023-24)

**ವಿಷಯ:** ಸ್ನಾತಕೋತ್ತರ ವಾಣಿಜ್ಯ ಕಾರ್ಯಕ್ರಮದ ದ್ವಿತೀಯ ಸೆಮಿಸ್ಟರಿನ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವಿತ ಕೋರ್ಸಿನ ಪಠ್ಯಕ್ರಮದಲ್ಲಿ ಒಟ್ಟು ಬೋಧನಾವಧಿಯನ್ನು ಮತ್ತು ಘಟಕವಾರು (Unit wise) ಬೋಧನಾವಧಿಗಳನ್ನು ನಮೂದಿಸಿಕೊಂಡು

ಪಠ್ಯಕ್ರಮಗಳನ್ನು ಸರಿಪಡಿಸಿ ಮರುಸಲ್ಲಿಸಲು ಅಧ್ಯಯನ ಮಂಡಳಿ ಅಧ್ಯಕ್ಷರಿಗೆ ತಿಳಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು: ಶೈ.ಮ.ಸಾ.ಸ.1:3(2023-24)

**ವಿಷಯ:** 2023-24ನೇ ಸಾಲಿಗೆ ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಬಗ್ಗೆ.

**ನಿರ್ಣಯ:** ಶೈಕ್ಷಣಿಕ ಮಂಡಳಿ ಸಮಿತಿಗೆ ಈ ಕೆಳಗಿನಂತೆ ಸದಸ್ಯರುಗಳನ್ನು ನಾಮನಿರ್ದೇಶನ ಮಾಡಲಾಯಿತು.

1. ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ
2. ಹಣಕಾಸು ಅಧಿಕಾರಿಯವರು, ಮಂಗಳೂರು ವಿಶ್ವವಿದ್ಯಾನಿಲಯ
3. ಪ್ರೊ.ಬಿ.ಆರ್.ಮಂಜುನಾಥ, ಸ್ನಾತಕೋತ್ತರ ಸಾಗರ ಭೂವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ
4. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಮಂಗಳೂರು
5. ಡಾ.ಭಾಸ್ಕರ ಶೆಟ್ಟಿ, ಪ್ರಾಂಶುಪಾಲರು, ಡಾ.ಜಿ.ಶಂಕರ್ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ, ಅಜ್ಜರಕಾಡು, ಉಡುಪಿ.
6. ಶ್ರೀ ಶಂಕರಮೂರ್ತಿ ಎಚ್.ಕೆ., ಪ್ರಾಂಶುಪಾಲರು, ಆಳ್ವಾಸ್ ಶಿಕ್ಷಣ ಕಾಲೇಜು, ಮೂಡಬಿದರೆ.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು: ಶೈ.ಮ.ಸಾ.ಸ.1:4(2023-24)

**ವಿಷಯ:** ಫಾದರ್ ಮೈಕಲ್ ಸಾಂತುಮಯೋರ್, ಶೈಕ್ಷಣಿಕ ಮಂಡಳಿ ಸದಸ್ಯರು ಸಲ್ಲಿಸಿರುವ ಗೊತ್ತುವಳಿ ಬಗ್ಗೆ.

**ಕ್ರಮ ಸಂಖ್ಯೆ:1.** It's very much desired that streaming of these UGC add on courses, especially Aviation and Hospitality Management, Travel and Tourism, Supply Chain and Logistic Management. In the approved syllabus some topics are over lapping. Syllabus topics need to be updated.

**ನಿರ್ಣಯ:** ಪ್ರಸ್ತಾವಿತ ಕೋರ್ಸುಗಳ ಪಠ್ಯಕ್ರಮಗಳಿಗೆ ಸಂಬಂಧಿಸಿದಂತೆ ಅಧ್ಯಯನ ಮಂಡಳಿ ಸಭೆಗೆ ಎಲ್ಲಾ ಕೋರ್ಸುಗಳ ವಿಷಯ ಪರಿಣಿತರು ಮತ್ತು ಗೊತ್ತುವಳಿ

ಮಂಡಿಸಿದವರನ್ನು ಆಹ್ವಾನಿಸಿಕೊಂಡು ಪಠ್ಯಕ್ರಮಗಳನ್ನು ಪರಿಷ್ಕರಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕ್ರಮ ಸಂಖ್ಯೆ:2.** The faculty who teach particular course to be appointed to set question papers and for evaluation work.

**ನಿರ್ಣಯ:** ಸಂಬಂಧಪಟ್ಟ ಅಧ್ಯಯನ ಮಂಡಳಿ ಸಭೆಯಲ್ಲಿಯೇ ಕ್ರಮಕೈಗೊಳ್ಳಬೇಕಾಗಿ ತಿಳಿಸಲಾಯಿತು.

**ಕ್ರಮ ಸಂಖ್ಯೆ:** Examination time table and results of the same to be announced in time.

**ನಿರ್ಣಯ:** ಕುಲಸಚಿವರು (ಪರೀಕ್ಷಾಂಗ) ಇವರಿಗೆ ಸೂಕ್ತ ಕ್ರಮಕೈಗೊಳ್ಳಬೇಕಾಗಿ ತಿಳಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಶೈ.ಮ.ಸಾ.ಸ.1:5(2023-24)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "Smt. Cyprian Cornelio Memorial Gold Medal" ಪ್ರದಾನ ಮಾಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಶೈ.ಮ.ಸಾ.ಸ.1:6(2023-24)

**ವಿಷಯ:** ಘಟಕ ಕಾಲೇಜುಗಳ ಕಾಲೇಜು ಅಭಿವೃದ್ಧಿ ಸಮಿತಿಯ ಕಾರ್ಯವೈಖರಿಯ ಪರಿನಿಯಮ ರಚನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:7(2023-24)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮಂಜೂರಾಗಿರುವ ಪ್ರಯೋಗಾಲಯ ಸಹಾಯಕ ಹುದ್ದೆಗಳಿಂದ ಶೇಕಡ 20 ಹುದ್ದೆಗಳನ್ನು ಹಿರಿಯ ಪ್ರಯೋಗಾಲಯ ಸಹಾಯಕ ಹುದ್ದೆಯನ್ನಾಗಿ ಪರಿವರ್ತಿಸುವ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು: ಶೈ.ಮ.ಸಾ.ಸ.1:8(2023-24)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2023-24ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2022-23ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ

ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:9(2023-24)

**ವಿಷಯ:** DRAFT STATUTE GOVERNING THE PROVISION OF ENGAGING THE PROFESSOR OF PRACTICE IN MANGALORE UNIVERSITY AND COLLEGES ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:10(2023-24)

**ವಿಷಯ:** DRAFT STATUTE GOVERNING THE ESTABLISHMENT OF DEPARTMENT OF POSTGRADUATE STUDIES AND RESEARCH IN TULU IN MANGALORE UNIVERSITY, MANGALAGANGOTHRI ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:11(2023-24)

**ವಿಷಯ:** Draft Statute Governing the Establishment of Department of Postgraduate Studies and Research in Microbiology in Mangalore University ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:12(2023-24)

**ವಿಷಯ:** Draft Statute Governing the Establishment of Department of Postgraduate Studies and Research in Bio-Chemistry in Mangalore University ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:13(2023-24)

**ವಿಷಯ:** Draft Statute Governing the Establishment of Post Graduate Studies and Research in Physical Education and Sports in Mangalore University,

Mangalagangothri, Dakshina Kannada District ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:14(2023-24)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕೇತರ ಹುದ್ದೆಗಳ (ಆಡಳಿತ, ಲಿಪಿಕ ಮತ್ತು ಇನ್ನಿತರ ಬೋಧಕೇತರ ಹುದ್ದೆಗಳ) ವೃಂದ ಮತ್ತು ನೇಮಕಾತಿ ನಿಯಮಗಳ ಕ್ರೋಢೀಕೃತ ಪರಿಷ್ಕೃತ ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:15(2023-24)

**ವಿಷಯ:** ದಿನಾಂಕ 28.02.2022ರಂದು ನಡೆದ ಸಿಂಡಿಕೇಟು ಸಭೆಯು ಕೈಗೊಂಡ ನಿರ್ಣಯದಂತೆ ತಾತ್ಕಾಲಿಕ ನೆಲೆಯಲ್ಲಿ ನೇಮಕಗೊಂಡು 2005ರಲ್ಲಿ ಖಾಯಂಗೊಂಡ ಸಿಬ್ಬಂದಿಗಳ ಖಾಯಂಪೂರ್ವದ ಸೇವೆಯನ್ನು ಸೂಪರ್‌ನ್ಯೂಮರರಿಯಾಗಿ ಸೇವಾಹಿರಿತನ, ಮುಂಭಡ್ತಿ ನೀಡಲು ನಿಯಮಾನುಸಾರ ಪರಿನಿಯಮ ರಚಿಸುವ ಬಗ್ಗೆ.

**ನಿರ್ಣಯ:** ಸದರಿ ಪ್ರಸ್ತಾವನೆಯನ್ನು ಸುದೀರ್ಘವಾಗಿ ಚರ್ಚಿಸಲಾಗಿ, ರಾಜ್ಯದ ಇತರೆ ವಿಶ್ವವಿದ್ಯಾನಿಲಯ/ಇತರೆ ಸರಕಾರಿ ಇಲಾಖೆಗಳಲ್ಲಿ ಸೂಪರ್‌ನ್ಯೂಮರರಿ ಹುದ್ದೆಗಳನ್ನು ಸೃಜಿಸುವ ಅವಕಾಶವಿಲ್ಲದಿರುವ ಹಾಗೂ ಈ ರೀತಿಯ ಹುದ್ದೆಗಳನ್ನು ಸೃಜಿಸಿದಲ್ಲಿ ವಿಶ್ವವಿದ್ಯಾನಿಲಯದ ಇತರೆ ಸಿಬ್ಬಂದಿಗಳಿಗೆ ತೊಂದರೆಯಾಗುವ ವಿಚಾರವೂ ಸಭೆಯಲ್ಲಿ ಪ್ರಸ್ತಾಪವಾಯಿತು. ಈ ಹಿನ್ನೆಲೆಯಲ್ಲಿ ಮಂಡಿಸಲಾದ ಕಾರ್ಯಸೂಚಿಗೆ ಸಂಬಂಧಿಸಿದಂತೆ ಸಮಗ್ರ ಮಾಹಿತಿಗಳನ್ನು ಎಲ್ಲಾ ಶೈಕ್ಷಣಿಕ ಮಂಡಳಿ ಸದಸ್ಯರುಗಳಿಗೆ ಮುಂಚಿತವಾಗಿ(advance) ಒದಗಿಸಿಕೊಡಲು ತಿಳಿಸಿ ಮುಂದಿನ ಶೈಕ್ಷಣಿಕ ಮಂಡಳಿ ಸಭೆಗೆ ಕಾರ್ಯಸೂಚಿ ಮಂಡಿಸಬೇಕಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಶೈ.ಮ.ಸಾ.ಸ.1:16(2023-24)

**ವಿಷಯ:** ಸ್ನಾತಕೋತ್ತರ ಶಿಕ್ಷಣಶಾಸ್ತ್ರ ಕಾರ್ಯಕ್ರಮದ ಆಯ್ಕೆ ಪತ್ರಿಕೆಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

ನಿರ್ಣಯ: ಪ್ರಸ್ತಾವಿತ ಕೋರ್ಸುಗಳ ಪಠ್ಯಕ್ರಮಗಳಲ್ಲಿ ಒಟ್ಟು ಬೋಧನಾವಧಿಯನ್ನು ಮತ್ತು ಘಟಕವಾರು (Unit wise) ಬೋಧನಾವಧಿಗಳನ್ನು ನಮೂದಿಸಿಕೊಂಡು ಪಠ್ಯಕ್ರಮಗಳನ್ನು ಸರಿಪಡಿಸಿ ಮರುಸಲ್ಲಿಸಲು ಅಧ್ಯಯನ ಮಂಡಳಿ ಅಧ್ಯಕ್ಷರಿಗೆ ತಿಳಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಶೈ.ಮ.ಸಾ.ಸ.1:17(2023-24)

**ವಿಷಯ:** ಪದವಿ ಕಾರ್ಯಕ್ರಮಗಳಲ್ಲಿ Gender Sensitization ಕೋರ್ಸಿನ ಬಗ್ಗೆ.

**ನಿರ್ಣಯ:** ಪದವಿ ಕಾರ್ಯಕ್ರಮಗಳ 5ನೇ ಸೆಮಿಸ್ಟರಿಗೆ ನಿಗದಿಪಡಿಸಲಾದ ಒಟ್ಟು ಕಾರ್ಯಭಾರದಲ್ಲಿ ಪ್ರಸ್ತಾವಿತ ಕೋರ್ಸಿನ ಬೋಧನೆಗೆ ಕಾಲಾವಕಾಶವಿಲ್ಲದ ಕಾರಣ ಸದರಿ ವಿಷಯದ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವುಮೂಡಿಸಲು ಕಾಲೇಜಿನಲ್ಲಿರುವ Women's Grievance Redressal Cellನ ಮೂಲಕ ಕನಿಷ್ಠ 2 ಕಾರ್ಯಕ್ರಮಗಳಿಗೆ ಮೀರದಂತೆ ಕಾರ್ಯಕ್ರಮಗಳನ್ನು/ ಕಾರ್ಯಗಾರಗಳನ್ನು ಹಮ್ಮಿಕೊಳ್ಳಬೇಕಾಗಿ ಹಾಗೂ ಈ ಬಗ್ಗೆ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆಯಿಂದಲೂ ಸುತ್ತೋಲೆ ಹೊರಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಶೈ.ಮ.ಸಾ.ಸ.1:18(2023-24)

**ವಿಷಯ:** ಮುಖ್ಯ ಛಾಯಾಗ್ರಾಹಕ ಹುದ್ದೆಯ ಸೃಜನೆಗೆ ಸಂಬಂಧಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧ ಕಟ್ಟದಲ್ಲಿರುವ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ಧ್ವನಿ ಸ್ಪಷ್ಟತೆಯಿಲ್ಲದಿರುವ ಬಗ್ಗೆ ಸದಸ್ಯರೊಬ್ಬರು ಸಭೆಯಲ್ಲಿ ತಿಳಿಸಿದ ಹಿನ್ನೆಲೆಯಲ್ಲಿ ಮಾನ್ಯ ಕುಲಪತಿಯವರು ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳಬೇಕಾಗಿ ಕುಲಸಚಿವರಿಗೆ ತಿಳಿಸಿದರು.

2. ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ವರ್ಷ 2023-24ನೇ ಸಾಲಿನ ಪದವಿ ಕಾರ್ಯಕ್ರಮಗಳ ತರಗತಿಗಳನ್ನು ದಿನಾಂಕ 23.08.2023ರಿಂದ ಪ್ರಾರಂಭಿಸುವುದಾಗಿ ಮಾನ್ಯ ಕುಲಪತಿಯವರು

ಸಭೆಯಲ್ಲಿ ತಿಳಿಸಿದರು.

3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುಶಾಸನ ರಚನಾ ಸಮಿತಿಯು ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಎಲ್ಲಾ ಪರಿನಿಯಮ, ವಿನಿಯಮ ಮತ್ತು ಇತರೆ ಸಂಬಂಧಿ ಕೆಲಸಗಳನ್ನು ಅಚ್ಚುಕಟ್ಟಾಗಿ ಕ್ಲಪ್ತ ಸಮಯದಲ್ಲಿ ನಿರ್ವಹಿಸುತ್ತಿರುವ ಬಗ್ಗೆ ಹಾಗೂ ಅದರ ಕಾರ್ಯವೈಖರಿಗೆ ಪ್ರಶಂಸೆಯನ್ನು ವ್ಯಕ್ತಪಡಿಸಿದರು.

   ಅನುಶಾಸನ ರಚನಾ ಸಮಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈಗಾಗಲೇ ನಿವೃತ್ತಿ ಹೊಂದಿರುವ ಸ್ನಾತಕೋತ್ತರ ಆಂಗ್ಲ ವಿಭಾಗದ ಪ್ರಾಧ್ಯಾಪಕರಾದ ಪ್ರೊ.ಕಿಶೋರಿ ನಾಯಕ್ ಮತ್ತು ಸ್ನಾತಕೋತ್ತರ ವಸ್ತು ವಿಜ್ಞಾನ ವಿಭಾಗದ ಪ್ರಾಧ್ಯಾಪಕರಾದ ಪ್ರೊ.ಮಂಜುನಾಥ ಪಟ್ಟಾಬಿ ಇವರುಗಳು ಸದರಿ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ವಿಶ್ವವಿದ್ಯಾನಿಲಯದ ಆಡಳಿತಾತ್ಮಕ ಕಾರ್ಯಗಳಲ್ಲಿ ಸಲ್ಲಿಸುತ್ತಿರುವ ಸೇವೆಯನ್ನು ಶ್ಲಾಘಿಸಿ, ಮಾನ್ಯ ಕುಲಪತಿಯವರು ಸಭೆಯಲ್ಲಿ ಕೃತಜ್ಞತೆಯನ್ನು ಸಲ್ಲಿಸಿದರು.

4. ಶೈಕ್ಷಣಿಕ ವರ್ಷ 2022-23ನೇ ಸಾಲಿನ ಪದವಿ ಕಾರ್ಯಕ್ರಮಗಳ ಎರಡನೆಯ, ನಾಲ್ಕನೇಯ ಮತ್ತು ಆರನೇ ಸೆಮಿಸ್ಟರುಗಳ ಪರೀಕ್ಷೆಗಳು ಅಂತಿಮ ಹಂತದಲ್ಲಿದ್ದು, ಮೌಲ್ಯಮಾಪನ ಕಾರ್ಯಗಳನ್ನು ನಿಗದಿತ ಸಮಯಕ್ಕೆ ಪೂರ್ಣಗೊಳಿಸಲು ಪದವಿ ಕಾಲೇಜುಗಳ ಎಲ್ಲಾ ಅತಿಥಿ ಉಪನ್ಯಾಸಕರು ಮತ್ತು ಖಾಯಂ ಉಪನ್ಯಾಸಕರುಗಳು ತಮ್ಮ ಸಹಕಾರವನ್ನು ನೀಡಬೇಕಾಗಿ ಮಾನ್ಯ ಕುಲಪತಿಯವರು ಸಭೆಯಲ್ಲಿ ತಿಳಿಸಿದರು. ಅಲ್ಲದೆ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆಯಿಂದಲೂ ಎಲ್ಲಾ ಕಾಲೇಜುಗಳಿಗೆ ಈ ಬಗ್ಗೆ ಸೂಕ್ತ ನಿರ್ದೇಶನ ಹೊರಡಿಸಬೇಕೆಂಬುದಾಗಿಯೂ ತಿಳಿಸಿದರು.

ಮಾನ್ಯ ಕುಲಸಚಿವರು ಸದಸ್ಯರುಗಳ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| **ಸಹಿ/-** | **ಸಹಿ/-** |
| **ಕುಲಸಚಿವರು** | **ಕುಲಪತಿಗಳು** |